# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 23 | Pages. 2 | Date: 19-12-2025, FRIDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 23 – ಪುಟಗಳು : 2 | 19-12-2025 | ಶುಕ್ರವಾರ | Ph: 8762954248 | ದರ : ₹1


# ಆಯವ್ಯಯ ಸಭೆಯಲ್ಲಿ ದೂರುಗಳ ಸುರಿಮಳೆ

## ಅಧಿಕಾರಿಗಳ ವಿರುದ್ಧ ಜನರ ಆಕ್ರೋಶ | ಪೊಲೀಸರ ಮಧ್ಯಸ್ಥಿಕೆಯಿಂದ ಪರಿಸ್ಥಿತಿ ಶಾಂತ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಮಹಾನಗರ ಪಾಲಿಕೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ 2026-27ನೇ ಸಾಲಿನ ಆಯವ್ಯಯ ತಯಾರಿ ಕುರಿತ ಮೊದಲ ಹಂತದ ಸಾರ್ವಜನಿಕ ಸಮಾಲೋಚನಾ ಸಭೆಯಲ್ಲಿ ನಗರ ನಿವಾಸಿಗಳು ದೂರುಗಳ ಸುರಿಮಳೆಗೈದರು.

ನಗರಸಭೆ, ಪಾಲಿಕೆಯಾಗಿ ಮೇಲ್ದರ್ಜೆಗೇರಿದ ನಂತರ ನಡೆದ ಮೊದಲ ಬಜೆಟ್ ತಯಾರಿ ಪೂರ್ವ ಸಭೆಗೆ ಅಪಾರ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸಿ ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಮುಂದೆ ಹೇಳಿಕೊಂಡರು. ಸಭೆಯಲ್ಲಿ ಕೆಲವು ವಿಚಾರಗಳಲ್ಲಿ ಅಧಿಕಾರಿಗಳ ಪರ-ವಿರೋಧ ಹೇಳಿಕೆ ಹೆಚ್ಚಾದ್ದರಿಂದ ಪರಿಸ್ಥಿತಿ ವಿಕೋಪಕ್ಕೆ ತಿರುಗಿತು. ಪೊಲೀಸರು ಮಧ್ಯ ಪ್ರವೇಶಿಸಿ ಶಾಂತಿ ಕಾಪಾಡಿದರು.

ಗುಡ್ಡೆನಹಳ್ಳಿ ನಿವಾಸಿ ರಂಗಸ್ವಾಮಿ ಮಾತನಾಡಿ, ತಮ್ಮೂರ ಬಳಿಯ ಸರ್ಕಾರಿ ಕೆರೆಯ ದುಸ್ಥಿತಿ ವಿವರಿಸಿದರು. ಕೆರೆಯಲ್ಲಿ ಕಸ ಸುರಿದು ನೀರು ಸಂಪೂರ್ಣವಾಗಿ ಮಲಿನಗೊಂಡಿದೆ. ಗಿಡಗಂಟಿ ಬೆಳೆದು ದುರ್ವಾಸನೆ ಬೀರುತ್ತಿದೆ. ಸುತ್ತಮುತ್ತಲ ನಿವಾಸಿಗಳಿಗೆ ನಾನಾ ಕಾಯಿಲೆ ಹರಡುವ ಭೀತಿ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕೆರೆ ಸ್ವಚ್ಛಗೊಳಿಸಲು ಜಿಲ್ಲಾಧಿಕಾರಿ, ತಹಸೀಲ್ದಾರ್ ಮತ್ತು ಆಯುಕ್ತರಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಸ್ಪಂದನೆ ಸಿಕ್ಕಿಲ್ಲ ಎಂದು ದೂರಿದರು. ಅಧಿಕಾರಿಗಳನ್ನು ಗುರಿಯಾಗಿಸಿ ಮಾತನಾಡಬಾರದು ಎಂದು ಕೆಲವರು ಆಕ್ಷೇಪ ವ್ಯಕ್ತಪಡಿಸಿದಾಗ ಸಭೆಯಲ್ಲಿ ಗೊಂದಲ ಉಂಟಾಯಿತು.

ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೀಶ್ ಮಾತನಾಡಿ, ಮಹಾನಗರ ಪಾಲಿಕೆಯ ಕೆಲವು ಅಧಿಕಾರಿಗಳು, ಕೆಲಸದ ಒತ್ತಡದಿಂದ ಕೆಳ ಹಂತದ ಅಧಿಕಾರಿಗಳು ಹಾಗೂ ಸಾರ್ವಜನಿಕರೊಂದಿಗೆ ಸರಿಯಾಗಿ ನಡೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿದರು.

ನಗರದ ಅನೇಕ ವೃತ್ತಗಳಲ್ಲಿ ರಸ್ತೆ ದಾಟುವುದು ಅತಿ ಕಷ್ಟಕರವಾಗಿದೆ. ಪಾದಚಾರಿಗಳ ಸುರಕ್ಷತೆಗೆ ಫ್ಲೈಓವರ್‌ಗಳ ಅಗತ್ಯವಿದೆ ಎಂದು ಕೆಲವರು ಸಲಹೆ ನೀಡಿದರು. ಅಂಬೇಡ್ಕರ್ ವೃತ್ತಗಳಲ್ಲಿ ಪ್ರತಿಮೆ ಸ್ಥಾಪನೆ, ಪರಿಶಿಷ್ಟ ಜಾತಿ-ಪಂಗಡದವರಿಗಾಗಿ ಟೈಲರಿಂಗ್ ಮಿಷನ್‌ಗಳ ವಿತರಣೆ ಮಾಡಬೇಕೆಂದು ಒತ್ತಾಯಿಸಿದರು.

ವಿನಾಯಕ ನಗರದ ಮಾಜಿ ಸೈನಿಕರೊಬ್ಬರು ಮಾತನಾಡಿ, ಪಾದಚಾರಿ ಮಾರ್ಗಗಳಲ್ಲಿ ಯುಜಿಡಿ ಸರಿಯಾಗಿ ಮುಚ್ಚಿಲ್ಲ, ಅನೇಕ ಮೂಲಭೂತ ಸಮಸ್ಯೆ ವರ್ಷಗಳಿಂದ ಬಗೆಹರಿಯದೇ ಉಳಿದಿವೆ. ಇಂತಹ ಸ್ಥಿತಿಯಲ್ಲಿ ನಾಗರಿಕರು ತೆರಿಗೆ ಮತ್ತು ಸುಂಕಗಳನ್ನು ಏಕೆ ಪಾವತಿಸಬೇಕು ಎಂದು ಪ್ರಶ್ನಿಸಿದರು.

### ಒತ್ತುವರಿ ತೆರವಿಗೆ ಹೆಚ್ಚಿದ ಒತ್ತಡ

ಬಿ.ಕಾಟೀಹಳ್ಳಿಯ ಮುಖ್ಯ ರಸ್ತೆಯಲ್ಲಿ ಪೈಪ್ ಒಡೆದು ನೀರು ವ್ಯರ್ಥವಾಗುತ್ತಿದೆ, ಬಸ್ ತಂಗುದಾಣ ದ್ವಿಚಕ್ರ ವಾಹನ ಪಾರ್ಕಿಂಗ್ ಸ್ಥಳವಾಗಿದ್ದು, ಪ್ರಯಾಣಿಕರಿಗೆ ತೊಂದರೆಯಾಗಿದೆ. ಮನವಿ ಸಲ್ಲಿಸಿದರೂ ಯಾರೂ ಸ್ಪಂದಿಸಿಲ್ಲ ಎಂದು ಸ್ಥಳೀಯರು ದೂರಿದರು.ನಗರದ ವಿವಿಧ ಭಾಗಗಳಲ್ಲಿ ಅಂಗಡಿ ಮಾಲೀಕರು ಪಾದಚಾರಿ ಮಾರ್ಗಗಳನ್ನು ಆಕ್ರಮಿಸಿಕೊಂಡಿದ್ದು, ಸಾರ್ವಜನಿಕರು ಓಡಾಡದಂತಾಗಿದೆ. ಒತ್ತುವರಿ ತೆರವುಗೊಳಿಸಿ ಪಾದಚಾರಿಗಳಿಗೆ ಅನುಕೂಲ ಕಲ್ಪಿಸಬೇಕೆಂಬ ಮನವಿ ಕೇಳಿ ಬಂತು.

ಜೈ ಭೀಮ್ ಬ್ರಿಗೇಡ್ ಜಿಲ್ಲಾಧ್ಯಕ್ಷ ರಾಜೇಶ್ ಮಾತನಾಡಿ, ವಾರ್ಡ್ ನಂಬರ್ 18ರಲ್ಲಿ ಸಮುದಾಯದ ಜಾಗವಿದ್ದು, ಅಂಬೇಡ್ಕರ್ ಭವನ ನಿರ್ಮಾಣಕ್ಕಾಗಿ ಹಲವು ಬಾರಿ ಮನವಿ ಸಲ್ಲಿಸಿದರೂ ಅಧಿಕಾರಿಗಳು ಹಾಗೂ ಹಿಂದಿನ ಜನಪ್ರತಿನಿಧಿಗಳು ಸ್ಪಂದಿಸಿಲ್ಲ.

ಈ ಬಾರಿಯಾದರೂ ಸುಮಾರು 20 ಲಕ್ಷ ರೂ. ಅನುದಾನ ಬಿಡುಗಡೆ ಮಾಡಿ ಭವನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಪರಿಶಿಷ್ಟ ಜಾತಿಯ ರುದ್ರಭೂಮಿಗೆ 24.10 ಎಕರೆ ವ್ಯಾಪ್ತಿಯಲ್ಲಿ ಸ್ಮಶಾನ ಅಭಿವೃದ್ಧಿಗೆ 20 ಲಕ್ಷ ಅನುದಾನ ನೀಡಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಭಾಗವಹಿಸಿದ್ದ ಬಹುತೇಕರು ತಮ್ಮ ವಾರ್ಡ್‌ಗಳ ಮೂಲಭೂತ ಸಮಸ್ಯೆಗಳನ್ನು ಆದ್ಯತೆಯಾಗಿ ಪ್ರಸ್ತಾಪಿಸಿದರು. ಹತ್ತಾರು ಸಮಸ್ಯೆಗಳ ಬಗ್ಗೆ ವ್ಯಾಪಕ ಚರ್ಚೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಹಾನಗರ ಪಾಲಿಕೆ ಆಡಳಿತಾಧಿಕಾರಿ ನಿತೀಶ್‌ಪಟೇಲ್, ಆಯುಕ್ತ ಕೃಷ್ಣಮೂರ್ತಿ ಮೊದಲಾದವರು ಎಲ್ಲ ಮನವಿ ಆಲಿಸಿ, ಸಾಧ್ಯವಾದಷ್ಟು ಶೀಘ್ರ ಪರಿಶೀಲನೆ ಮಾಡಿ, ಪರಿಹಾರಕ್ಕೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ಇಂಡಿಯಾನಾ ಆಸ್ಪತ್ರೆಯಲ್ಲಿ ಸಂತಾನ ಲಾಭ ಶಿಬಿರ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಇಂಡಿಯಾನ ಆಸ್ಪತ್ರೆಯಲ್ಲಿ ತಿಂಗಳ ಪ್ರತಿ ಶುಕ್ರವಾರ ಉಚಿತ ಸಂತಾನ ಲಾಭ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಆಸ್ಪತ್ರೆಯ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞೆ ಡಾ. ಕೆ. ಇಂಪನ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಹಾಸನದಲ್ಲಿ ಮೊದಲ ಬಾರಿಗೆ ಉಚಿತ ವೈದ್ಯಕೀಯ ಸಮಾಲೋಚನೆ, ಸ್ಕ್ಯಾನಿಂಗ್, ವೀರ್ಯಾಣು ಪರೀಕ್ಷೆ ಮತ್ತು ವೈದ್ಯಕೀಯ ಸಲಹೆ ನೀಡಲಾಗುತ್ತಿದೆ. ಆರ್.ಸಿ. ರಸ್ತೆಯ ಇಂಡಿಯಾನಾ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಮತ್ತು ಹಾರ್ಟ್ ಸೆಂಟರ್‌ನಲ್ಲಿ ಬೆಳಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ಶಿಬಿರ ನಡೆಯಲಿದೆ ಎಂದರು.

ಮಕ್ಕಳಿಲ್ಲದ ದಂಪತಿಗೆ ನಮ್ಮ ಆಸ್ಪತ್ರೆಯಲ್ಲಿ ಮಗುವನ್ನು ಪಡೆಯುವ ಕನಸನ್ನು ನನಸು ಮಾಡುವುದರ ಜೊತೆಗೆ ನೋವು ರಹಿತ ಹೆರಿಗೆ ಸೌಲಭ್ಯ, 24X7 ಇನ್ಸೆಂಟಿವ್ ಕೇರ್ ಮತ್ತು ಅನಸ್ತೇಷಿಯಾ ವ್ಯವಸ್ಥೆ ಇದೆ. ಇಬ್ಬರು ಕಾರ್ಡಿಯಾಲಜಿಸ್ಟ್ ಇದ್ದಾರೆ ಎಂದರು.

ಮಕ್ಕಳಾಗದಿರುವುದಕ್ಕೆ ಹೆಂಗಸರಷ್ಟೇ ಕಾರಣ ಅಲ್ಲ, ಗಂಡಸರಲ್ಲೂ ಬಂಜೆತನ ಇರಲಿದೆ. ಆ ಬಗ್ಗೆ ಪರಿಶೀಲಿಸಿ ಸಲಹೆ ನೀಡಲಾಗುವುದು.ಮದುವೆ ಆಗಿ 1 ವರ್ಷ ಕಳೆದರೂ ಮಕ್ಕಳಾಗದೇ ಇದ್ದರೆ ವೈದ್ಯರನ್ನು ಸಂಪರ್ಕಿಸುವುದು ಸೂಕ್ತ ಎಂದು ಸಲಹೆ ನೀಡಿದರು.

ಮಕ್ಕಳ ತಜ್ಞೆ ಡಾ.ದಿವ್ಯಾ ಮಾತನಾಡಿ, ನಮ್ಮಲ್ಲಿ ನವಜಾತ ಶಿಶುಗಳ ತೀವ್ರ ನಿಗಾಘಟಕ ಇದೆ. ಮಕ್ಕಳ ಬೆಳವಣಿಗೆ, ಆರೈಕೆ, ಎತ್ತರ, ತೂಕದ ಬಗ್ಗೆ ಉಚಿತ ಸಲಹೆ ನೀಡಲು ಉಚಿತನವಾಗಿ ನ್ಯೂಟ್ರೇಷನ್ ಫ್ರೈಡೇ ಮಾಡಲು ಚಿಂತಿಸಲಾಗಿದೆ ಎಂದರು.


ಆಸ್ಪತ್ರೆ ಆಡಳಿತಾಧಿಕಾರಿ ಪ್ರದೀಪ್ ಮಾತನಾಡಿ, ಆಸ್ಪತ್ರೆಯಲ್ಲಿ ಸಂತಾನಲಾಭ ಶಿಬಿರ ಸೇರಿ ಗ್ರಾಮೀಣ ಭಾಗದಲ್ಲಿ ಹಲವು ಶಿಬಿರ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

# ಹೋರಾಟಗಾರರ ವಿರುದ್ಧ ಕೇಸ್: ಸದನದಲ್ಲಿ ಗಂಭೀರ ಚರ್ಚೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೆಳಗಾವಿ: ಅರ್ಜುನ ಆನೆಯ ಸ್ಮಾರಕ ವಿಚಾರವಾಗಿ ಹೋರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ಸರ್ಕಾರ ಕೂಡಲೇ ಹಿಂಪಡೆಯಬೇಕೆಂದು ಶಾಸಕ ಸಿಮೆಂಟ್ ಮಂಜು ಆಗ್ರಹಿಸಿದ್ದಾರೆ.

ಚಳಿಗಾಲದ ಅಧಿವೇಶನದಲ್ಲಿ ಗಮನ ಸೆಳೆಯುವ ಗೊತ್ತುವಳಿಯಲ್ಲಿ ಮಾತನಾಡಿದ ಅವರು, ಮಲೆನಾಡಿನ ಜನರು ಸೌಮ್ಯ ಸ್ವಭಾವದವರು. ಇದುವರೆಗೆ ಕಾಡಾನೆ ದಾಳಿಯಿಂದ 75ಕ್ಕೂ ಜನರು ಜೀವ ಕಳೆದುಕೊಂಡಿದ್ದಾರೆ. ಜೊತೆಗೆ ಕಾಡಾನೆಗಳ ಹಾವಳಿಯಿಂದ ಬೆಳೆ ನಷ್ಟ ಸಂಭವಿಸಿದ್ದರು ಸಹ ಕ್ರಮ ಕೈಗೊಂಡಿಲ್ಲ. 2023ರ ಡಿ. 4 ರಂದು ತಾಲ್ಲೂಕಿನ ಯಸಳೂರು ಹೋಬಳಿಯ ದಬ್ಬಳ್ಳಿಕಟ್ಟೆಯಲ್ಲಿ ಕಾಡಾನೆ ಸೆರೆ ಕಾರ್ಯಾಚರಣೆಯಲ್ಲಿ ಅರ್ಜುನ ಆನೆ ಮೃತಪಟ್ಟಿತ್ತು. ಆ ಸಂದರ್ಭದಲ್ಲಿ ಅರ್ಜುನ ಆನೆಯ ಮೃತ ದೇಹವನ್ನುರಸ್ತೆ ಬದಿಯಲ್ಲಿ ಅಂತ್ಯ ಸಂಸ್ಕಾರ ನಡೆಸುವುದರಿಂದ ಪ್ರವಾಸೋದ್ಯಮಕ್ಕೆ ಹೆಚ್ಚಿನ ಬಲ ನೀಡಿದಂತಾಗುತ್ತದೆ ಎಂದು ಸ್ಥಳೀಯರು ಹಾಗೂ ಹೋರಾಟಗಾರರು ಮನವಿ ಮಾಡಿದ್ದರು.




ಅದನ್ನೇ ನೆಪವಾಗಿ ಇಟ್ಟುಕೊಂಡು ಪೊಲೀಸರು, ಅಪರಿಚಿತ ವ್ಯಕ್ತಿಗಳು ಗಲಭೆಗೆ ಕಾರಣ ಎಂದು ಪ್ರಕರಣ ದಾಖಲಿಸಿದ್ದರು. ಆದರೆ ಎರಡು ವರ್ಷಗಳ ನಂತರ 19 ಜನರಿಗೆ ನ್ಯಾಯಾಲಯದ ಸಮನ್ಸ್ ಕಳುಹಿಸಲಾಗಿದೆ. ಇದರಲ್ಲಿ ಕೆಲವರು ಪ್ರತಿಭಟನೆಯಲ್ಲಿ ಭಾಗಿಯಾಗೆ ಇರಲಿಲ್ಲ ಅಂಥವರ ವಿರುದ್ಧ ಸಹ ಪ್ರಕರಣ ದಾಖಲಾಗಿದೆ. ಕಾಡಾನೆ ಹಾವಳಿ ವಿರುದ್ಧದ ಹೋರಾಟಗಾರರು ಹಾಗೂ ಸ್ಥಳೀಯ ಅಮಾಯಕ ಯುವಕರು ಸೇರಿದಂತೆ 19 ಜನರ ಮೇಲೆ ಪೊಲೀಸರು ವಿವಿಧ ಸೆಕ್ಷನಡಿ ಪ್ರಕರಣ ದಾಖಲಿಸಿರುವುದು ಖಂಡನೀಯ. ಡಿ. 30 ರಂದು ನ್ಯಾಯಲಯಕ್ಕೆ ಹಾಜರಾಗುವಂತೆ ಹೋರಾಟಗಾರರಿಗೆ ಸಮನ್ಸ್ ಜಾರಿಯಾಗಿದೆ. ಆದ್ದರಿಂದ ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಹೋರಾಟಗಾರರ ಮೇಲೆ ದಾಖಲಾಗಿರುವ ಪ್ರಕರಣವನ್ನು ವಾಪಸ್ ಪಡೆಯುವಂತೆ ಸಭಾಧ್ಯಕ್ಷರ ಮೂಲಕ ಸದನದಲ್ಲಿದ್ದ ಗೃಹ ಸಚಿವರು ಹಾಗೂ ಅರಣ್ಯ ಸಚಿವರಿಗೆ ಒತ್ತಾಯಿಸಿದರು.

### ಗೃಹ ಸಚಿವರ ಸಕಾರಾತ್ಮಕ ಸ್ಪಂದನೆ

ಶಾಸಕ ಸಿಮೆಂಟ್ ಮಂಜು ಸದನದಲ್ಲಿ ಮಾತನಾಡುವ ಮುನ್ನ ಗೃಹ ಸಚಿವ ಜಿ. ಪರಮೇಶ್ವರ್ ಅವರನ್ನು ಕಚೇರಿಯಲ್ಲಿ ಭೇಟಿ ಮಾಡಿ ಹೋರಾಟಗಾರರ ಮೇಲೆ ದಾಖಲಾಗಿರುವ ಪ್ರಕರಣದ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಗೃಹ ಸಚಿವರು, ಪ್ರಕರಣದ ಮಾಹಿತಿಯನ್ನು ಪಡೆದು ಮುಖ್ಯಮಂತ್ರಿ, ಅರಣ್ಯ ಸಚಿವರೊಂದಿಗೆ ಚರ್ಚೆ ನಡೆಸಿ ಹೋರಾಟಗಾರರ ಮೇಲಿನ ಪ್ರಕರಣವನ್ನು ಸರ್ಕಾರ ವಾಪಸ್ ಪಡೆಯಲಿದೆ ಎಂದು ಭರವಸೆ ನೀಡಿದ್ದಾರೆ ಶಾಸಕರು ತಿಳಿಸಿದರು.

# ದಲಿತರ 7 ಎಕರೆ ಜಮೀನು ಸವರ್ಣೀಯರಿಗೆ ಖಾತೆ: ಆರೋಪ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹೊಳೆನರಸೀಪುರ ತಾಲೂಕು ಹಳ್ಳಿಮೈಸೂರು ಹೋಬಳಿ ಮಾದಿಹಳ್ಳಿ ಗ್ರಾಮದ ಪರಿಶಿಷ್ಟ ಜಾತಿಗೆ ಸೇರಿದ ದ್ಯಾವ ಎಂಬುವರ ಪಿತ್ರಾರ್ಜಿತ 7 ಎಕರೆ ಜಮೀನನ್ನು ಸವರ್ಣೀಯರಿಗೆ ಪೌತಿ ಖಾತೆ ಮಾಡಿ ಅನ್ಯಾಯ ಮಾಡಲಾಗಿದೆ ಎಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಎಂ.ಸೋಮಶೇಖರ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ರಾಜಸ್ವ ನಿರೀಕ್ಷಕ ಎಂ.ಎನ್. ಉದಯ್ ಕುಮಾರ್ ಮತ್ತು ಗ್ರಾಮ ಲೆಕ್ಕಾಧಿಕಾರಿ ಸುನೀಲ್‌ಗೌಡ ಎಂಬುವರು ಹಣದ ಆಸೆಗಾಗಿ ಅಕ್ರಮವಾಗಿ ಖಾತೆ ಮಾಡಿಕೊಟ್ಟಿದ್ದಾರೆ. ಕೂಡಲೇ ಅವರನ್ನು ಅಮಾನತು ಮಾಡಿ, ಎಸ್‌ಸಿ/ಎಸ್‌ಟಿ ದೌರ್ಜನ್ಯ ಕಾಯ್ದೆ ಪ್ರಕಾರ ಕೇಸು ದಾಖಲಿಸಬೇಕು ಹಾಗೂ ಅಕ್ರಮ ಖಾತೆ ರದ್ದು ಮಾಡಿ ದಲಿತನಿಗೆ ಆಗಿರುವ ಅನ್ಯಾಯ ಸರಿಪಡಿಸಬೇಕು ಎಂದು ಆಗ್ರಹಿಸಿದರು.

ಗ್ರಾಮದ ಸ.ನಂ.9/1 ರಲ್ಲಿ ದ್ಯಾವ




ಬಿನ್ ಕರಿಯ ಅವರ ಹೆಸರಿನಲ್ಲಿ 8.24 ಎಕರೆ ಜಮೀನಿತ್ತು. ಅವರ ಮತ್ತವರ ಪತ್ನಿ, ಮಕ್ಕಳು ನಿಧನ ಹೊಂದಿದ್ದಾರೆ. ವಂಶವೃಕ್ಷದ ಪ್ರಕಾರ ಈರಯ್ಯ ಮತ್ತು ವರಲಕ್ಷ್ಮಿ ಎಂಬುವರು ವಾರಸುದಾರರಾಗಿರುತ್ತಾರೆ. ಈ ನಡುವೆ 1 ಎಕರೆ 24 ಗುಂಟೆ ಜಮೀನು 1997 ರಲ್ಲಿ ಹೇಮಾವತಿ ಜಲಾಶಯಕ್ಕೆ ಭೂ ಸ್ವಾಧೀನ ಆಗಿದೆ. ಉಳಿದ 7 ಎಕರೆ ಜಮೀನು ಈರಯ್ಯ ಬಿನ್ ಕರಿಯ ಎಂಬುವರ ಹೆಸರಿನಲ್ಲೇ ಸ್ವಾಧೀನದಲ್ಲಿದೆ. ಹಾಲಿ ಅನುಭವದಾರರೂ ಈರಯ್ಯ ಅವರೇ ಆಗಿದ್ದಾರೆ ಎಂದರು.

ಅದೇ ಹಳ್ಳಿ ಮೈಸೂರು ಹೋಬಳಿಯ ಜಾಕನಹಳ್ಳಿ ಗ್ರಾಮದ ರೇವಣ್ಣ, ನಾಗಮ್ಮ, ರಂಗಮ್ಮ, ದೊಡ್ಡೇಗೌಡ, ರಾಜೇಗೌಡ ಎಂಬುವರ ಹೆಸರಿಗೆ ಪರಿಶಿಷ್ಟ ಜಾತಿಯವರಿಗೆ ಸೇರಿದ 7 ಎಕರೆ ಜಮೀನನ್ನು ಪೌತಿ ಆಧಾರದ ಮೇಲೆ ಅಕ್ರಮವಾಗಿ ಎಂ.ಆರ್.ಹೆಚ್ 2023 ಜ.9 ರಂದು ರಾಜಸ್ವ ನಿರೀಕ್ಷಕ ಎಂ.ಎನ್. ಉದಯ ಕುಮಾರ್ ಜಂಟಿ ಖಾತೆ ಮಾಡಿಕೊಟ್ಟಿದ್ದಾರೆ ಎಂದು ದೂರಿದರು. ಅಕ್ರಮವಾಗಿ ಖಾತೆ ಮಾಡಿಸಿಕೊಂಡಿರುವ ಸರ್ವರ್ಣೀಯರು ನೀಡಿರುವ ವಂಶವೃಕ್ಷ ದಾಖಲೆ, ಕುಟುಂಬದ ಮರಣ ದಾಖಲೆಗೂ, ಪಹಣಿಗೂ ತಾಳೆಯೇ ಇರುವುದಿಲ್ಲ. ಆದರೂ ದಲಿತರ ಭೂಮಿಯನ್ನ ಸವರ್ಣೀಯರ ಹೆಸರಿಗೆ ಮಾಡಿಕೊಟ್ಟಿರುವ ಅಧಿಕಾರಿಗಳ ಮೇಲೆ ಕೂಡಲೇ ಕ್ರಮ ಕೈಗೊಳ್ಳಬೇಕು. ಏಕೆಂದರೆ ಜಮೀನಿನ ಮೂಲಕ ಮಾಲೀಕ ಈರಯ್ಯ ಅವರು ಈಗ ಸರ್ವರ್ಣೀಯರ ಬೆದರಿಕೆಗೆ ಹೆದರಿ ಈಗ ಊರು ತೊರೆದು ಬೇರೆಡೆ ಜೀವನ ಸಾಗಿಸುತ್ತಿದ್ದಾರೆ.

ಅದಕ್ಕೆ ಕಾರಣಾಗಿರುವ ಭ್ರಷ್ಟ ಅಧಿಕಾರಿಗಳ ವಿರುದ್ಧ ಕ್ರಮ ಆಗಬೇಕು. ಕೂಡಲೇ ಅವರನ್ನು ಅಮಾನತು ಪಡಿಸಬೇಕು. ಈ ಸಂಬಂಧ ಈಗಾಗಲೇ ಪೊಲೀಸರು ಸೇರಿದಂತೆ ಜಿಲ್ಲಾಡಳಿತದ ಅಧಿಕಾರಿಗಳು, ಲೋಕಾಯುಕ್ತ, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯಕ್ಕೆ ದೂರು ನೀಡಲಾಗಿದೆ. ಸಂಬಂಧಪಟ್ಟವರು ತುರ್ತು ಕ್ರಮ ಕೈಗೊಂಡು ಬಡ ದಲಿತನಿಗೆ ನ್ಯಾಯ ಕೊಡಿಸಬೇಕು ಎಂದು ಮನವಿ ಮಾಡಿದರು.

ಹಿರಿಯ ದಲಿತ ಮುಖಂಡ ಹೆಚ್.ಕೆ.ಸಂದೇಶ್, ಮಾದಿಗ ದಂಡೋರ ಸಮಿತಿಯ ಟಿ.ಆರ್.ವಿಜಯಕುಮಾರ್, ಮುಖಂಡರಾದ ಮಂಜು, ಉಮೇಶ್ ತೇಜೂರು, ಸಂತ್ರಸ್ತ ರೈತ ಈರಯ್ಯ ಹಾಜರಿದ್ದರು.

# ಮ್ಯಾಕ್ಸ್ ಲೈಫ್ ಇನ್ಸೂರೆನ್ಸ್ ಕಂಪೆನಿಗೆ 15 ಸಾವಿರ ರೂ. ದಂಡ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವಿಮಾ ಕಂಪನಿಯ ತಪ್ಪನ್ನು ಎತ್ತಿ ಹಿಡಿದಿರುವ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಮ್ಯಾಕ್ಸ್ ಲೈಫ್ ಇನ್ಸೂರೆನ್ಸ್ ಕಂಪೆನಿಗೆ 15 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ನಗರದ ಹೆಚ್.ಪಿ.ಕಿರಣ್ ಆಯೋಗದಿಂದ ನ್ಯಾಯ ಪಡೆದಿರುವ ವ್ಯಕ್ತಿ. ಕಿರಣ್ ಅವರು ಮ್ಯಾಕ್ಸ್ ಲೈಫ್ ಇನ್ಶ್ಯೂರೆನ್ಸ್ ಕಂಪನಿಗೆ 46,046 ರೂ. ಪಾವತಿಸಿ ವಿಮೆ ಪಡೆದಿದ್ದರು. ತಂದೆ-ತಾಯಿ ಹೆಸರು ದೃಢೀಕರಣಕ್ಕೆ ಆಧಾರ್‌ನ ಜೆರಾಕ್ಸ್ ಪ್ರತಿ ನೀಡಿದ್ದರು. ಆದರೆ ಕಂಪೆನಿಯ ಏಜೆಂಟ್ ಆಧಾರ್ ಕಾರ್ಡ್ ಪರಿಶೀಲಿಸದೆ ತಪ್ಪು ಹೆಸರು, ಇ-ಮೇಲ್ ವಿಳಾಸ ನಮೂದಿಸಿದ್ದರು. ಬಾಂಡ್ ಕೈ ಸೇರಿದ ಬಳಿಕ ಲೋಪಗಳನ್ನು ಕಂಡ ಕಿರಣ್ ಅವರು ಏಜೆಂಟರ್‌ರನ್ನು ಪ್ರಶ್ನಿಸಿದರೂ ಸಕಾರಾತ್ಮಕ ಪ್ರತಿಕ್ರಿಯೆ ಬಂದಿರಲಿಲ್ಲ.

ಆದ್ದರಿಂದ ಅವರು ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಗೆ ದೂರು ಸಲ್ಲಿಸಿದ್ದರು. 2024ರ ನ. 22 ರಂದು ನೋಟೀಸ್ ಜಾರಿ ಮಾಡಿದಾಗ ಕಂಪೆನಿಯು ಮತ್ತೊಂದು ಬಾಂಡ್ ಕಳುಹಿಸಿಕೊಟ್ಟಿತ್ತು. ಅದರಲ್ಲೂ ಅದೇ ಲೋಪದೋಷಗಳು ಕಂಡುಬಂದ ಹಿನ್ನೆಲೆಯಲ್ಲಿ ಕಿರಣ್ ಅವರು ತಮಗೆ ಉಂಟಾಗಿರುವ ಸೇವಾ ನ್ಯೂನ್ಯತೆಗಾಗಿ 54 ಸಾವಿರ ರೂ. ಪರಿಹಾರ ಕೊಡಿಸುವಂತೆ ಪರಿಹಾರ ಆಯೋಗಕ್ಕೆ ಕೋರಿದ್ದರು.

ಈ ವೇಳೆ ವಿಚಾರಣೆಗೆ ಹಾಜರಾಗಿದ್ದ ಕಂಪನಿಯ ಸಿಬ್ಬಂದಿ, ವಿಮಾದಾರನು ಸರಿಯಾದ ಮಾಹಿತಿ ನೀಡಬೇಕು. ಬಾಂಡ್‌ನಲ್ಲಿ ಏನಾದರೂ ತಪ್ಪಿದ್ದರೆ ತಕ್ಷಣವೇ ಸರಿಪಡಿಸಲು ಆಯ್ಕೆಗಳಿದ್ದರೂ ಅದ್ಯಾವುದನ್ನು ಮಾಡದೆ ಸುಖಾ ಸುಮ್ಮನೆ ಆರೋಪ ಮಾಡುತ್ತಿದ್ದಾರೆ. ಆದ್ದರಿಂದ ಸೇವಾ ನ್ಯೂನ್ಯತೆ ಭರಿಸುವುದು ಸಾಧ್ಯವಿಲ್ಲವೆಂದು ವಾದಿಸಿದ್ದರು.

ವಾದ-ಪ್ರತಿವಾದ ಆಲಿಸಿದ ಆಯೋಗದ ಅಧ್ಯಕ್ಷೆ ಸಿ.ಎಂ. ಚಂಚಲ ಅವರು, ಪಾಲಿಸಿಯಲ್ಲಿ ವಿಮಾದಾರರ ತಂದೆ- ಹೆಂಡತಿ ಹೆಸರು ತಪ್ಪಾಗಿ ನಮೂದಾಗಿರುವುದರ ಬಗ್ಗೆ ಎದುರುದಾರರಿಗೆ ನೋಟೀಸ್ ಮೂಲಕ ತಿಳಿಸಿದ್ದು, ಆದರೂ ಸರಿಪಡಿಸದೆ ತಪ್ಪುಗಳಿರುವ ಬಾಂಡ್ ಅನ್ನೇ ನೀಡಿ ಸೇವಾ ನ್ಯೂನ್ಯತೆ ಉಂಟು ಮಾಡಿದ್ದಾರೆ. ಈ ತಪ್ಪಿಗೆ ಅರ್ಜಿದಾರರ ಖರ್ಚು 5 ಸಾವಿರ ರೂ., ಮಾನಸಿಕ ಹಿಂಸೆಗೆ 5 ಸಾವಿರ ರೂ. ಮತ್ತು ಸೇವಾ ನ್ಯೂನ್ಯತೆಗಾಗಿ 5 ಸಾವಿರ ರೂ.ಗಳನ್ನು ಮುಂದಿನ 45 ದಿನಗಳ ಒಳಗೆ ಪಾವತಿಸಬೇಕೆಂದು ಡಿ. 16ರಂದು ಆದೇಶಿಸಿದ್ದಾರೆ.

# ಸಾಮಾಜಿಕ ಸೇವಾ ರತ್ನ ಪ್ರಶಸ್ತಿಗೆ ರಾಶಿಕ್ ಗೌಡ ಭಾಜನ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಬೆಂಗಳೂರಿನ ಗಾಂಧಿ ಭವನದಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ ವತಿಯಿಂದ ವಿಶ್ವಮಾನವ ಹಕ್ಕುಗಳ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಬೂಕ ಗ್ರಾಮದ ರಾಶಿಕ್ ಗೌಡ ಅವರಿಗೆ ಸಾಮಾಜಿಕ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ರಾಶಿಕ್ ಗೌಡ ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿಯ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದು ಸಾಮಾಜಿಕ ಸೇವೆ ಮೂಲಕ ಶೋಷಿತರ ಬದುಕನ್ನು ಉತ್ತಮ ಪಡಿಸುವಲ್ಲಿ ಹಾಗೂ ಸೃಜನಶೀಲತೆಯನ್ನು ಪ್ರೇರೇಪಿಸುವಲ್ಲಿ ವಿಶೇಷ ಪಾಲ್ಗೊಳ್ಳುವಿಕೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗಿದೆ.

ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ ಸಂಸ್ಥಾಪಕ ಅಧ್ಯಕ್ಷ ಕೆ.ಸಂತೋಷ್, ಉಪಾಧ್ಯಕ್ಷ ಮಹಾದೇವ್, ಕಾನೂನು ಸಲಹೆಗಾರ ದೀಪಕ್, ಕರ್ನಾಟಕ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಎಂ.ಎಸ್.ಶಂಕರಗುಳ್ಳಿ, ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಇತರರಿದ್ದರು.

# 930 ಕಾರ್ಡ್‌ಗಳು ಬಿಪಿಎಲ್‌ನಿಂದ ಎಪಿಲ್‌ಗೆ ವರ್ಗ

ಬೆಳಗಾವಿ: ಶ್ರವಣಬೆಳಗೊಳ ಕ್ಷೇತ್ರ ವ್ಯಾಪ್ತಿಯಲ್ಲಿ 930 ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ ಪರಿವರ್ತಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ವಿಧಾನಸಭೆ ಅಧಿವೇಶನದಲ್ಲಿ ಶಾಸಕ ಸಿ.ಎನ್.ಬಾಲಕೃಷ್ಣ ಅವರ, ಶ್ರವಣಬೆಳಗೊಳ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಬಿಪಿಎಲ್ ಪಡಿತರ ಚೀಟಿಗಳು ಎಪಿಎಲ್ ಪಡಿತರ ಚೀಟಿಗಳಾಗಿ ಪರಿವರ್ತನೆಯಾಗಿವೆ ಎಂಬ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ಕೇಂದ್ರ ಸರ್ಕಾರವು ರಾಜ್ಯಾದ್ಯಂತ 7,76,206 ಪಡಿತರ ಕಾರ್ಡ್‌ಗಳನ್ನು ಶಂಕಾಸ್ಪದ ಪಡಿತರ ಫಲಾನುಭವಿಗಳ ಪಟ್ಟಿಗೆ ಸೇರಿಸಿದೆ. ಈ ರೀತಿ ತಾತ್ಕಾಲಿಕವಾಗಿ ಪರಿವರ್ತನೆಯಾದ ಚೀಟಿದಾರರು ಪುನ: ಬಿಪಿಎಲ್‌ಗೆ ವರ್ಗಾವಣೆಯಾಗಬೇಕೆಂದರೆ ಸೂಕ್ತ ದಾಖಲೆಗಳೊಂದಿಗೆ 45 ದಿನಗಳ ಒಳಗೆ ತಹಶೀಲ್ದಾರ್‌ಗೆ ಮನವಿ ಸಲ್ಲಿಸಬೇಕು. ಅರ್ಜಿದಾರರು ಅರ್ಹರಾಗಿದ್ದರೆ ಅಧಿಕಾರಿಗಳು ಅದನ್ನು ಬದಲಿಸುತ್ತಾರೆಂದು ಹೇಳಿದರು.

# ನಾಳೆ ಕ್ರಿಸ್ಮಸ್ ಅಂಗವಾಗಿ ಭರವಸೆಯ ಜಾಥಾ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅಖಿಲ ಕರ್ನಾಟಕ ಯುನೈಟೆಡ್ ಕ್ರಿಶ್ಚಿಯನ್ ಫೋರಮ್ ಫಾರ್ ಹ್ಯೂಮನ್ ರೈಟ್ಸ್ ಹಾಗೂ ಜಿಲ್ಲೆಯ ಕ್ರೈಸ್ತ ಸಮುದಾಯದ ವತಿಯಿಂದ ಡಿ. 20 ರಂದು ಕ್ರಿಸ್ಮಸ್ 2025 ಭರವಸೆಯ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಗೌರವ ಅಧ್ಯಕ್ಷ ರೆ.ಫಾ.ಪ್ಯಾಟ್ರಿಕ್ ಜೋನ್ಸ್ ರಾವ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಅಂದು ಮಧ್ಯಾಹ್ನ 3 ಗಂಟೆಗೆ ನಗರದ ಸಂತ ಅಂತೋಣಿ ದೇವಾಲಯದಿಂದ ಜಾಥಾ ಹೊರಡಲಿದೆ. ಇದರಲ್ಲಿ ಸ್ತಬ್ಧ ಚಿತ್ರಗಳು, ಕ್ರಿಸ್ಮಸ್ ನೃತ್ಯ ರೂಪಕ, ಕೋಲಾಟ, ಕ್ರಿಸ್ಮಸ್ ಗಾಯನ ಆಯೋಜಿಸಲಾಗಿದೆ ಎಂದರು.

ಜಾಥಾದರಲ್ಲಿ ಸುಮಾರು 4-5 ಸಾವಿರ ಮಂದಿ ಭಾಗಿಯಾಗುವ ನಿರೀಕ್ಷೆಯಿದೆ. 2025 ಜ್ಯುಬಿಲಿ ವರ್ಷವಾಗಿದ್ದು, ಸಂಭ್ರಮವಾಗಿ ಆಚರಿಸುವ ಬದಲು ನೊಂದವರಲಿಗೆ ಭರವಸೆ ಆಗಲಿ ಎಂದು ಜಾಥಾ ನಡೆಸಲಾಗುತ್ತಿದೆ. ಸಂತ ಅಂತೋನಿಯವರ ದೇವಾಲಯದಿಂದ ಹೊರಡುವ ಜಾಥಾವು ಎನ್. ಆರ್.ವೃತ್ತ, ಹೇಮಾವತಿ ಪ್ರತಿಮೆ, ಮಹಾವೀರ ವೃತ್ತ, ಸಹ್ಯಾದ್ರಿ ಸರ್ಕಲ್, ಮಹಾರಾಜ ಪಾರ್ಕ್ ರಸ್ತೆ, ಸ್ಲೇಟರ್ಸ್ ಮೆಮೋರಿಯಲ್ ಹಾಲ್ ವೃತ್ತ, ಆರ್.ಸಿ.ರಸ್ತೆ ಮೂಲಕ ಸಂಚರಿಸಿ ಮತ್ತೆ ಜಿಲ್ಲಾ ಪಂಚಾಯ್ತಿ ಹಿಂಭಾಗದ ಸ್ವಸ್ಥಾನಕ್ಕೆ ಬರಲಿದೆ ಎಂದು ವಿವರಿಸಿದರು. ಸಂಜೆ ಚರ್ಚ್ ಆವರಣದಲ್ಲಿ ನಡೆಯುವ ಕ್ರಿಸ್ಮಸ್ ಕಾರ್ಯಕ್ರಮದಲ್ಲಿ ಚಿಕ್ಕಮಗಳೂರು ಧರ್ಮಕ್ಷೇತ್ರದ ಹ್ಯೂಮನ್ ರೈಟ್ಸ್‌ನ ಛೇರ್ಮನ್ ಹಾಗೂ ಹಾಸನ-ಚಿಕ್ಕಮಗಳೂರು ಧರ್ಮಕ್ಷೇತ್ರದ ಬಿಷಪ್ ಡಾ.ಪಿ.ಅಂತೋಣಿದಾಸ್, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಭಾಗವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ರೆ.ಫಾ.ಸುದರ್ಶನ್ ಕುಮಾರ್, ಸಿ.ಎಸ್.ಜೋಸೆಫ್, ಕಾರ್ಯದರ್ಶಿ ಎಸಿಲ್ವೆಸ್ಟರ್, ಜೋಶ್ವಾ ಇದ್ದರು.

# ಸಂಚಾರಕ್ಕೆ ಸಂಚಕಾರ ತಂದ ಆನೆಮಹಲ್ ರಸ್ತೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಸಕಲೇಶಪುರ: ರಾಷ್ಟ್ರೀಯ ಹೆದ್ದಾರಿ 75 ಸಂಪರ್ಕ ಕಲ್ಪಿಸುವ ತಾಲೂಕಿನ ಆನೆಮಹಲ್-ಹಾನುಬಾಳು-ಮೂಡಿಗೆರೆ ಮಾರ್ಗವಾಗಿ ಸಾಗುವ ಪ್ರಮುಖ ರಸ್ತೆ ಗುಂಡಿಗಳಿಂದ ತುಂಬಿ ಹೋಗಿ ಸಂಚಾರಕ್ಕೆ ಸಂಚಕಾರ ತಂದಿದೆ.

ಬೆಂಗಳೂರು-ಮಂಗಳೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ-75 ಹಾಗೂ ಮಂಗಳೂರು-ಕಡೂರು, ಉಡುಪಿ-ವಿಲ್ಲುಪುರಂ ರಾಷ್ಟ್ರೀಯ ಹೆದ್ದಾರಿಗಳನ್ನು ಜೋಡಿಸುವ ಈ ರಸ್ತೆಯು ಹದಗೆಟ್ಟಿರುವುದರಿಂದ ವಾಹನ ಸಂಚಾರ ದುಸ್ತರವಾಗಿದೆ. ಹಾನುಬಾಳು ಹೋಬಳಿ ಕೇಂದ್ರ ತಲುಪಲು ಇದೇ ಮುಖ್ಯ ರಸ್ತೆಯಾಗಿರುವುದರಿಂದ ಈ ಭಾಗದ ಹೋಂ ಸ್ಟೇ, ರೆಸಾರ್ಟ್‌ಗಳಿಗೆ ತೆರಳುವ ಪ್ರವಾಸಿಗರಿಗೂ ತೊಂದರೆಯುಂಟಾಗಿದೆ.

ಶಿರಾಡಿ ಅಥವಾ ಚಾರ್ಮಾಡಿ ಘಾಟ್ ರಸ್ತೆಯಲ್ಲಿ ಅಪಘಾತ ಅಥವಾ ಮಳೆಗಾಲದಲ್ಲಿ ಭೂಕುಸಿತದಿಂದ ವಾಹನ ಸಂಚಾರ ಅಸ್ತವ್ಯಸ್ತವಾದರೆ, ಆನೆಮಹಲ್-ಹಾನುಬಾಳು-ಮೂಡಿಗೆರೆ ರಸ್ತೆ ಎರಡು ರಾಷ್ಟ್ರೀಯ ಹೆದ್ದಾರಿಗಳಿಗೆ ಪ್ರಮುಖ ಪರ್ಯಾಯ ಸಂಪರ್ಕ ಮಾರ್ಗವಾಗಿದೆ. ಅನಿವಾರ್ಯ ಸಂದರ್ಭಗಳಲ್ಲಿ ಈ ರಸ್ತೆಯಲ್ಲಿ ಹೆಚ್ಚಿನ ವಾಹನ ದಟ್ಟಣೆ ಉಂಟಾಗುತ್ತದೆ. ಇಂತಹ ಪ್ರಮುಖ ರಸ್ತೆಯಲ್ಲಿ ನಿತ್ಯ ಸಂಚರಿಸುವ ಜನರು ಗುಂಡಿಗಳ ಕಾರಣಕ್ಕೆ ಜೀವದ ಹಂಗು ತೊರೆದು ಪ್ರಯಾಣಿಸುವ ಪರಿಸ್ಥಿತಿ ಎದುರಾಗಿದೆ.

ರಸ್ತೆ ತುಂಬೆಲ್ಲಾ ಗುಂಡಿ, ಮಳೆ ನೀರು ಹರಿಯಲು ಸೂಕ್ತ ಚರಂಡಿ ವ್ಯವಸ್ಥೆಯಿಲ್ಲದೆ ತೀವ್ರ ಸಮಸ್ಯೆ ಎದುರಾಗಿದೆ.

ಮಳೆಗಾಲ ಮುಗಿದು ಡಿಸೆಂಬರ್ ಅರ್ಧ ತಿಂಗಳು ಕಳೆದರೂ ಪ್ಯಾಚ್‌ವರ್ಕ್ ಕೂಡ ಆರಂಭವಾಗಿಲ್ಲ. ಸಂಬಂಧಪಟ್ಟ ಇಲಾಖೆ ಎಂಜಿನಿಯರ್‌ಗಳನ್ನು ಪ್ರಶ್ನಿಸಿದರೆ, ಹಣವಿಲ್ಲ, ಅಂದಾಜು ಪಟ್ಟಿ ಕಳುಹಿಸಿದ್ದೇವೆ, ಇನ್ನೂ ಟೆಂಡರ್ ಆಗಿಲ್ಲ, ಏಜೆನ್ಸಿ ಫಿಕ್ಸ್ ಆಗಿಲ್ಲ ಎಂಬ ಉತ್ತರ ನೀಡಲಾಗುತ್ತಿದೆ. ಮೂಡಿಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ರಸ್ತೆ ಗುಂಡಿ ಮುಚ್ಚುವ ನಡೆಯುತ್ತಿರುವಾಗ, ಇಲ್ಲಿ ಮಾತ್ರ ಯಾಕೆ ನಿರ್ಲಕ್ಷ್ಯ ವಹಿಸಲಾಗಿದೆ. ಇದು ಸರ್ಕಾರದ ಇಬ್ಬಗೆ ನೀತಿಯಲ್ಲವೇ ಎಂದು ಸ್ಥಳೀಯರಾದ ಅವರೇಕಾಡು ಪೃಥ್ವಿ ಪ್ರಶ್ನಿಸಿದ್ದಾರೆ.

ಸಂಪೂರ್ಣ ಮರು ಡಾಂಬರಿಕರಣ ಅಗತ್ಯವಿರುವ ಈ ರಸ್ತೆಗೆ ಕನಿಷ್ಠ ಪ್ಯಾಚ್ ವರ್ಕ್ ಕೂಡ ಮಾಡದಿರುವುದರಿಂದ ವಾಹನಗಳ ಸಂಚಾರಕ್ಕೆ ಸಮಸ್ಯೆ ಎದುರಾಗಿದೆ. ಶೀಘ್ರದಲ್ಲೇ ಗುಂಡಿ ಸಮಸ್ಯೆಗೆ ಪರಿಹಾರ ಒದಗಿಸದಿದ್ದಲ್ಲಿ, ಹಾನುಬಾಳು ಹೋಬಳಿ ವ್ಯಾಪ್ತಿಯ ಎಲ್ಲಾ ಗ್ರಾಮಸ್ಥರು ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

# ಕಲಿಕಾ ಹಬ್ಬ ಜ್ಞಾನವೃದ್ಧಿಗೆ ಸಹಕಾರಿ: ಕಿರಣ್ ಕುಮಾರ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಮಕ್ಕಳಲ್ಲಿ ಸಂಖ್ಯಾ ಜ್ಞಾನವನ್ನು ಅಭಿವೃದ್ಧಿಗೊಳಿಸಲು ಕಲಿಕಾ ಹಬ್ಬ ಆಚರಿಸಲಾಗುತ್ತಿದೆ ಎಂದು ಕಸಬಾ ಹೋಬಳಿ ಶಿಕ್ಷಣ ಸಂಯೋಜಕ ಕಿರಣ್‌ಕುಮಾರ್ ತಿಳಿಸಿದರು. ಕಸಬಾ ಮರಸು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಿದ್ದ ಕಸಬಾ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಲಹೆಯಂತೆ ಮೂರು ವರ್ಷಗಳಿಂದ ಕಲಿಕಾ ಹಬ್ಬ ಆಚರಿಸಿಕೊಂಡು ಬರಲಾಗುತ್ತಿದೆ. ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳಿಗೆ ಸಂಖ್ಯಾಜ್ಞಾನದ ಮೂಲಕ ಶಿಕ್ಷಣದ ಅರಿವು ಮೂಡಿಸಲಾಗುತ್ತದೆ ಎಂದರು.

ಕ್ಲಸ್ಟರ್ ವ್ಯಾಪ್ತಿಗೊಳಪಡುವ ಎಲ್ಲ ಶಾಲೆಗಳ ವಿದ್ಯಾರ್ಥಿಗಳನ್ನು ಒಂದೆಡೆ ಸೇರಿಸಿ ಮಾಡುವ ಕಾರ್ಯಕ್ರಮವಾಗಿದ್ದು, ವಿನೂತನ ಚಟುವಟಿಕೆಗಳ ಆಧಾರದಲ್ಲಿ ಮಕ್ಕಳಲ್ಲಿ ವಿಶೇಷ ಜ್ಞಾನದ ಅರಿವು ಮೂಡುತ್ತದೆ. ಕಲಿಕಾ ಹಬ್ಬದ ಸಂದರ್ಭದಲ್ಲಿ ಶಿಕ್ಷಣದ ಜೊತೆಗೆ ಪರಿಕರಗಳ ಸ್ವಚ್ಛತೆ ಮತ್ತು ಮರುಬಳಕೆ ಬಗ್ಗೆಯೂ ಅರಿವು ಮೂಡಿಸಲಾಗುತ್ತದೆ ಎಂದರು. ಗ್ರಾಮಸ್ಥ ಹರೀಶ್ ಮಾತನಾಡಿ, ಕಲಿಕಾ ಹಬ್ಬದ ಮೂಲಕ ಮಕ್ಕಳಲ್ಲಿ ಕಲಿಕೆಯನ್ನು ಪೋಷಿಸುತ್ತಿರುವುದು ಆಶಾದಾಯಕ. ತಾಲ್ಲೂಕಿನ ರಾಯರಕೊಪ್ಪಲಿನಲ್ಲಿ ಕೆಪಿಎಸ್ ಶಾಲೆ ತೆರೆದಿರುವುದು ಉತ್ತಮ ಬೆಳವಣಿಗೆ. ಅದೇ ರೀತಿ ಹೋಬಳಿಗೊಂದು ಕೆಪಿಎಸ್ ಶಾಲೆ ತೆರೆದು, ವಾಹನಗಳ ಮೂಲಕ ವಿದ್ಯಾರ್ಥಿಗಳನ್ನು ಕರೆತರುವುದರಿಂದ ಸರ್ಕಾರಿ ಶಾಲೆಗಳಲ್ಲಿ ದಾಖಲೆ ಪ್ರಮಾಣ ಹೆಚ್ಚಿಸಬಹುದು. ಇದಕ್ಕೆ ಸರ್ಕಾರ ಪೂರಕ ಸಹಕಾರ ಮಾಡಬೇಕು ಎಂದರು. ಡಯಟ್ ಹಿರಿಯ ಉಪನ್ಯಾಸಕಿ ಗಾಯಿತ್ರಿಬಾಯಿ, ಬಿ.ಆರ್.ಪಿ. ನಿಶಾಖ್ ಕೌಸರ್, ತಿಮ್ಮಶೆಟ್ಟಿ, ಪರಮೇಶ, ಸಂತೋಷ್, ಪುಷ್ಪ, ಕಿರಣ್, ಧರ್ಮ, ಶಿಕ್ಷಕಿ ವೇದಾವತಿ, ರಜಿನಾಮೇರಿ, ಲತಾಮಣಿ, ಲಕ್ಷ್ಮೀಶ, ಸಿಆರ್‌ಪಿ ಮೈಮುನಾ ಇತರರಿದ್ದರು.

# ಕಲಸಿಂದ ಪಿಎಸಿಸಿಎಸ್ ಅಧ್ಯಕ್ಷರಾಗಿ ಕೆ.ಆರ್. ಕೃಷ್ಣಮೂರ್ತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ತಾಲೂಕಿನ ಕಲಸಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಕೆ.ಆರ್. ಕೃಷ್ಣಮೂರ್ತಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕಲಸಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಹಿಂದಿನ ಅಧ್ಯಕ್ಷರಾಗಿದ್ದ ಬಿ.ಎನ್. ಸ್ವಾಮಿ ಅವರು ತಮ್ಮ ಸ್ಥಾನಕ್ಕೆ ರಾಜಿನಾಮೆ ಸಲ್ಲಿಸಿದ ಕಾರಣ ಚುನಾವಣೆ ನಿಗದಿಗೊಳಿಸಿತ್ತು. ಕೆ.ಆರ್.ಕೃಷ್ಣಮೂರ್ತಿ ಹೊರತುಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿಯಾಗಿದ್ದ ಸಹಕಾರ ಇಲಾಖೆ ಅಧಿಕಾರಿ ಬಿ.ಕೆ.ವಿಜಯೇಂದ್ರ ಆಯ್ಕೆ ಘೋಷಿಸಿದರು.

ರಾಜ್ಯ ಮಾರಾಟ ಮಹಾಮಂಡಳ ನಿರ್ದೇಶಕ ಸಿ.ಎನ್.ಪುಟ್ಟಸ್ವಾಮಿಗೌಡ ಮಾತನಾಡಿ, ಕಳೆದ ಸಾಲಿನಲ್ಲಿ ಸೇವೆ ಸಲ್ಲಿಸಿದ ಅಧ್ಯಕ್ಷರು ಸೊಸೈಟಿಯ ಅಭಿವೃದ್ಧಿಗೆ ಗಣನೀಯ ಸಾಧನೆ ಮಾಡಿದ್ದಾರೆ. ಸಹಕಾರಿ ಸಂಸ್ಥೆಗಳು ಸಹಕಾರ ತತ್ವದಡಿ ಕಾರ್ಯನಿರ್ವಹಿಸಿದಾಗ ಸಹಕಾರ ಸಂಸ್ಥೆಗಳು ಉನ್ನತಿಕರಣಗೊಳ್ಳಲು ಸಾಧ್ಯ. ಸೊಸೈಟಿ ಆರ್ಥಿಕವಾಗಿ ಸದೃಢವಾಗಿ ಬೆಳೆದಿದ್ದು ಸಂಘದಡಿ 6.24 ಕೋಟಿ ರೂ. ಕೆಸಿಸಿ ಸಾಲ ನೀಡಲಾಗಿದೆ. ಸ್ತ್ರೀ ಶಕ್ತಿ ಸಂಘಗಳಿಗೆ 11 ಲಕ್ಷ ರೂ. ಸಾಲ ನೀಡುವುದರ ಜೊತೆಗೆ 2025-26ನೇ ಸಾಲಿಗೆ ಸೊಸೈಟಿಯು 1.23 ಲಕ್ಷ ರೂ. ನಿವ್ವಳ ಲಾಭ ದಾಖಲಿಸಿದೆ. ಇಷ್ಟು ದೊಡ್ಡ ಮಟ್ಟದ ಸಾಲ ನೀಡಲು ಶಾಸಕ ಸಿ.ಎನ್. ಬಾಲಕೃಷ್ಣ ಅವರು 25 ವರ್ಷಗಳಿಂದ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಅಧ್ಯಕ್ಷರಾಗಿ, ನಿರ್ದೇಶಕರಾಗಿ ಕಾರ್ಯನಿರ್ವಹಿಸುವುದು ನಮಗೆ ವರದಾನವಾಗಿದೆ. ಸಹಕಾರದ ತತ್ವದಲ್ಲಿ ಹುಟ್ಟಿಕೊಂಡ ಸಂಸ್ಥೆಗಳು ಅಧಿಕ ಲಾಭದ ನಿರೀಕ್ಷೆ ಹೊಂದದೇ ಸಹಕಾರ ರಂಗದಲ್ಲಿ ಹೆಚ್ಚಿನ ಆಸಕ್ತಿ ವಹಿಸಿ ಕೃಷಿ ಉತ್ತೇಜನಕ್ಕೆ ಯೋಜನೆಗಳನ್ನು ರೂಪಿಸಬೇಕು. ಗ್ರಾಹಕರು, ರೈತರಿಗೆ ಸೇವೆ ಸಲ್ಲಿಸಲು ಮುಂದಾಗುವಂತೆ ತಿಳಿಸಿದರು. ನೂತನ ಅಧ್ಯಕ್ಷ ಕೆ.ಆರ್. ಕೃಷ್ಣಮೂರ್ತಿ ಮಾತನಾಡಿ, ಕಲಸಿಂದ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಹಿಂದೆ ಅಧ್ಯಕ್ಷರಾಗಿದ್ದವರೆಲ್ಲ ಸಂಘವನ್ನು ಅಭಿವೃದ್ಧಿಯತ್ತ ಮುನ್ನಡೆಸಿದ್ದಾರೆ. ಅವರೆಲ್ಲರ ಮಾರ್ಗದರ್ಶನ, ಸಲಹೆ ಪಡೆದು ಸಂಘವನ್ನು ನಡೆಸಿಕೊಂಡು ಹೋಗುವುದರ ಜೊತೆಗೆ ಶಾಸಕ ಬಾಲಕೃಷ್ಣ ಅವರಿಂದ ಹೆಚ್ಚಿನ ಅನುದಾನ ತಂದು ರೈತರಿಗೆ ಮತ್ತಷ್ಟು ಸಾಲ ನೀಡುವ ಮೂಲಕ ರೈತರ ಆರ್ಥಿಕತೆ ಬಲಗೊಳಿಸಲಾಗುವು ಎಂದರು. ಉಪಾಧ್ಯಕ್ಷೆ ಜಯಲಕ್ಷ್ಮಿ, ಮಾಜಿ ಅಧ್ಯಕ್ಷ ಬಿ.ಎನ್.ಸ್ವಾಮಿ, ನಿರ್ದೇಶಕರಾದ ಶಿವರಾಜ್, ಜಿ.ಆರ್. ಉಮೇಶ್, ತಿಮ್ಮೇಗೌಡ, ವಡ್ಡರಹಳ್ಳಿ ಮೋಹನ್‌ಕುಮಾರ್, ಜಿ.ಎಲ್.ನಾಗೇಶ್, ರತ್ನ, ಹರೀಶ್, ಮುನಿಸ್ವಾಮಿ ಹಾಗೂ ಇತರರಿದ್ದರು.

# ಹೋರಾಟಗಾರರ ವಿರುದ್ಧ ಕೇಸ್ ವಾಪಸ್‌ಗೆ ಪ್ರಯತ್ನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಸಕಲೇಶಪುರ: ಮೈಸೂರು ದಸರಾ ಅಂಬಾರಿ ಹೊರುತ್ತಿದ್ದ ಅರ್ಜುನ ಆನೆಯ ಸ್ಮಾರಕ ನಿರ್ಮಾಣಕ್ಕಾಗಿ ಆಗ್ರಹಿಸಿದ 19 ಹೋರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣ ವಾಪಾಸ್‌ಗೆ ಪ್ರಯತ್ನ ನಡೆಸಲಾಗುತ್ತಿದೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಅರ್ಜುನ ನಾಡಿನ ಸಾಂಸ್ಕೃತಿಕ ಸಂಕೇತ. 2023ರ ಡಿ. 4ರಂದು ನಡೆದ ಘಟನೆ ರಾಜ್ಯದ ಜನರಿಗೆ ಬೇಸರ ತರಿಸಿದೆ. ವೀರ ಮರಣವಪ್ಪಿದ ಸ್ಥಳದಲ್ಲಿ ಅಂತ್ಯಕ್ರಿಯೆ ಹಾಗು ಸ್ಮಾರಕ ನಿರ್ಮಿಸಬೇಕೆಂದು ಪ್ರತಿಭಟನೆ ನಡೆಸಿರುವುದು ನ್ಯಾಯವಮಾರ್ಗ. ಆದರೆ ಅರಣ್ಯ ಇಲಾಖೆ ಪ್ರಕರಣ ದಾಖಲಿಸಿರುವುದು ಖಂಡನೀಯ ಎಂದರು.

ಈ ಸಂಬಂಧ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದು, ಮುಖ್ಯಮಂತ್ರಿ ಅವರ ಗಮನಕ್ಕೂ ತರಲಾಗಿದೆ. ಬೆಳಗಾವಿ ಅಧಿವೇಶನ ಮುಗಿದ ಬಳಿಕ ಮತ್ತೊಮ್ಮೆ ಚರ್ಚಿಸಿ ಕೇಸ್ ವಾಪಾಸ್‌ಗೆ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಹೋರಾಟದ ಹೆಸರಿನಲ್ಲಿ ಕೆಲ ಸಂಘಟನೆಗಳು ಅಧಿಕಾರಿಗಳನ್ನು ಬೆದರಿಸುವುದು, ಬಡವರು ಹಾಗೂ ಕೂಲಿ ಕಾರ್ಮಿಕರ ಪರವೆಂದು ಸಮಾಜವನ್ನು ತಪ್ಪು ದಿಕ್ಕಿಗೆ ಕರೆದೊಯ್ಯುವ ಕೆಲಸಗಳು ನಡೆಯುತ್ತಿವೆ.

ಸುಖಾಸುಮ್ಮನೆ ಆರ್‌ಟಿಐ ಅರ್ಜಿ ಸಲ್ಲಿಸಿ ಅಧಿಕಾರಿಗಳನ್ನು ಹೆದರಿಸಿ ಹಣ ಪಡೆಯುವವರ ವಿರುದ್ಧ ಪ್ರಜ್ಞಾವಂತರು, ರಾಜಕೀಯ ನಾಯಕರು ಎಚ್ಚರ ವಹಿಸಬೇಕೆಂದರು. ತಾಲ್ಲೂಕು ಕಾಂಗ್ರೆಸ್ ಅಧ್ಯಕ್ಷ ಬೈರಮುಡಿ ಚಂದ್ರು ಮಾತನಾಡಿ, ಅರ್ಜುನ ಆನೆಯ ಪರವಾಗಿ ಹೋರಾಟ ನಡೆಸಿದವರ ವಿರುದ್ಧ ಪ್ರಕರಣ ದಾಖಲಾಗಿರುವುದನ್ನು ನಾಗರಿಕ ಸಮಾಜ ಸಹಿಸುವುದಿಲ್ಲ. ಆನೆಯ ಸಾವಿನಿಂದ ಉಂಟಾದ ಆಕ್ರೋಶ ಮಾನವ ಸಹಜ. ಇದು ಅನಿರೀಕ್ಷಿತ ಘಟನೆಯಾಗಿದೆ. ಹೋರಾಟಗಾರರು ಆತಂಕಪಡುವ ಅಗತ್ಯವಿಲ್ಲ. ನ್ಯಾಯಯುತ ಹೋರಾಟಗಾರರ ಮೇಲೆ ದಾಖಲಾದ ದಾವೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಅವರಿಗೆ ನ್ಯಾಯ ಒದಗಿಸುವುದಾಗಿ ಪಕ್ಷದ ವರಿಷ್ಠರು ಭರವಸೆ ನೀಡಿದ್ದಾರೆ ಎಂದರು.

ತಾಲ್ಲೂಕು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಸಯ್ಯದ್ ಮುಫೀಜ್, ಕಾಂಗ್ರೆಸ್ ಎಸ್‌ಸಿ, ಎಸ್‌ಟಿ ಘಟಕದ ಅಧ್ಯಕ್ಷ ಕಲ್ಗಣೆ ಪ್ರಶಾಂತ್, ಪ್ರಾಧಿಕಾರದ ಸದಸ್ಯರಾದ ವಿಜಯ್, ಉದಯ್ ಇತರರಿದ್ದರು.

# ಸಕಲೇಶಪುರದಲ್ಲಿ ಹೆಚ್.ಡಿ.ಕೆ. ಹೆಚ್.ಡಿ. ರೇವಣ್ಣ ಜನ್ಮ ದಿನಾಚರಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರ ಜನ್ಮದಿನವನ್ನು ಜೆಡಿಎಸ್ ಮುಖಂಡರು- ಕಾರ್ಯಕರ್ತರು ಬುಧವಾರ ಆಚರಿಸಿದರು.

ಜನ್ಮದಿನದ ಅಂಗವಾಗಿ ಪಟ್ಟಣದ ಸಕಲೇಶ್ವರಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಮುಖಂಡ ಬೆಕ್ಕನಹಳ್ಳಿ ನಾಗರಾಜ್ ಮಾತನಾಡಿ, ಹೆಚ್.ಡಿ. ಕುಮಾರಸ್ವಾಮಿ ಅವರು ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿ ರೈತಪರ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಜನರ ನಾಯಕನಾಗಿ ಗುರುತಿಸಿಕೊಂಡಿದ್ದಾರೆ ಎಂದು ಹೇಳಿದರು. ಕೇಂದ್ರ ಸರ್ಕಾರದಲ್ಲಿಯೂ ಸಚಿವರಾಗಿ ತಮ್ಮ ಖಾತೆಯನ್ನು ದಕ್ಷತೆಯಿಂದ ನಿರ್ವಹಿಸಿ ಹಲವು ಉತ್ತಮ ಯೋಜನೆಗಳ ಮೂಲಕ ದೇಶದಾದ್ಯಂತ ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆ ಎಂದು ಹೇಳಿದರು.

ಪುರಸಭಾ ಮಾಜಿ ಅಧ್ಯಕ್ಷೆ ಜ್ಯೋತಿ ರಾಜಕುಮಾರ್, ವಲಳಹಳ್ಳಿ ಪ್ರಸಾದ್, ಭಾಸ್ಕರ್, ಪ್ರಜ್ವಲ್ ಕರಗೂರು, ರಮೇಶ್ ಇತರರಿದ್ದರು.

# ಹಣಕಾಸಿನ ವಿಚಾರಕ್ಕೆ ರೌಡಿ ಶೀಟರ್ ಮೇಲೆ ಹಲ್ಲೆ

ಹಾಸನ: ಹಣಕಾಸಿನ ವಿಚಾರಕ್ಕೆ ರೌಡಿ ಶೀಟರ್ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ನಗರದಲ್ಲಿ ಬುಧವಾರ ನಡೆದಿದೆ.

ದುದ್ದ ಹೋಬಳಿ ಬೊಮ್ಮೆನಹಳ್ಳಿ ಗ್ರಾಮದ ಜೆಸಿಬಿ ಮಂಜು ಎಂಬ ರೌಡಿ ಶೀಟರ್ ಮೇಲೆ ಸ್ನೇಹಿತರಾದ ರಾಜೇಶ್, ಅಶೋಕ ಸೇರಿ 20ಕ್ಕೂ ಹೆಚ್ಚು ಜನರು ಹಲ್ಲೆ ನಡೆಸಿದ್ದಾರೆ. ತಲೆ ಮತ್ತು ಎದೆ ಭಾಗಕ್ಕೆ ಗಂಭೀರ ಗಾಯಗೊಂಡಿರುವ ಮಂಜುನನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ರಾಜೇಶ್‌ನು ಗುತ್ತಿಗೆದಾರನಾಗಿದ್ದು ಕ್ರಷರ್ ಮಾಲೀಕರೊಬ್ಬರಿಗೆ 1.50 ಲಕ್ಷ ರೂ. ಹಣ ಕೊಡಬೇಕಿದೆ. ಹಲವು ವರ್ಷಗಳಿಂದ ಹಣ ಬಾಕಿ ಉಳಿಸಿಕೊಂಡಿದ್ದರಿಂದ ಕ್ರಷರ್ ಮಾಲೀಕ ಮಂಜುಗೆ ಕರೆ ಮಾಡಿ ತನಗೆ ಬರಬೇಕಿದ್ದ ಹಣ ಕೊಡಿಸಿ ಎಂದು ಕೇಳಿದ್ದ. ಅದಕ್ಕೆ ಸಮ್ಮತಿಸಿದ್ದ ಮಂಜು ಬುಧವಾರ ಮಧ್ಯಾಹ್ನ ರಾಜೇಶ್‌ಗೆ ಕರೆ ಮಾಡಿ ನಗರದ ಬಾರ್‌ಗೆ ಕರೆಸಿಕೊಂಡಿದ್ದ ಎನ್ನಲಾಗಿದೆ. ಇಬ್ಬರೂ ಮದ್ಯ ಸೇವಿಸಿ ಹೊರಬಂದ ಬಳಿಕ ವಿಷಯ ಪ್ರಸ್ತಾಪಿಸಿದ ರೌಡಿ ಶೀಟರ್ ಮಂಜು, ಕ್ರಷರ್‌ನಿಂದ ಸಾಮಾಗ್ರಿ ತಂದಿದ್ದಕ್ಕೆ ಅವರಿಗೆ ದುಡ್ಡು ಕೊಡಬೇಕು. ವ್ಯವಹಾರದಲ್ಲಿ ಪಾರದರ್ಶಕವಾಗಿರಬೇಕೆಂದು ಬುದ್ದಿವಾದ ಹೇಳಿದ್ದಾನೆ. ಅಷ್ಟಕ್ಕೆ ಇಬ್ಬರ ನಡುವೆ ಮಾತಿನ ಚಕಮಕಿ ಏರ್ಪಟ್ಟು ಪರಿಸ್ಥಿತಿ ವಿಕೋಪಕ್ಕೆ ತಿರುಗಿದೆ. ಆಗ ರಾಜೇಶ್‌ನು ತನ್ನ ಸಹೋದರ ಅಶೋಕಗೆ ಕರೆ ಮಾಡಿ ಹುಡುಗರೊಂದಿಗೆ ಬರುವಂತೆ ತಿಳಿಸಿದ್ದಾನೆ. ತಕ್ಷಣವೇ ಇಪ್ಪತ್ತಕ್ಕೂ ಹೆಚ್ಚು ಜನರು ದೌಡಾಯಿಸಿ ಬಾರ್ ಹೊರಗಿನ ಫುಟ್‌ಪಾತ್ ಮೇಲೆ ನಿಂತಿದ್ದ ಮಂಜು ಮೇಲೆ ಹಲ್ಲೆ ನಡೆಸಿದ್ದಾರೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಇತಿಹಾಸದಲ್ಲಿ ಈ ದಿನ

### ಡಿಸೆಂಬರ್-19

1961: ಗೋವಾ, ದಮನ್ ಮತ್ತು ದಿಯು ಭಾರತಕ್ಕೆ ಸೇರ್ಪಡೆಯಾಯಿತು.
1978: ಸ್ಪೇನ್‌ನಲ್ಲಿ ಹೊಸ ಸಂವಿಧಾನ ಜಾರಿಯಾಯಿತು.
1997: ಹಾಂಗ್ ಕಾಂಗ್ ಚೀನಾ ಆಡಳಿತಕ್ಕೆ ವರ್ಗಾವಣೆ ಸಂಬಂಧಿಸಿದ ಒಪ್ಪಂದಗಳ ಅನುಷ್ಠಾನ ಪ್ರಕ್ರಿಯೆಗಳು ಅಂತಿಮ ಹಂತಕ್ಕೇರಿದವು

**ಜನನ**

1683: ಫ್ರಾಂಸ್ವಾ ಲಾ ಮೋಟ್, ಫ್ರೆಂಚ್ ಅನ್ವೇಷಕ
1910: ಜೀನ್ ಜೆನೆ, ಫ್ರೆಂಚ್ ಸಾಹಿತಿ ಮತ್ತು ನಾಟಕಕಾರ

**ಮರಣ**

1848: ಎಮಿಲಿ ಬ್ರಾಂಟೆ, ಇಂಗ್ಲಿಷ್ ಕಾದಂಬರಿಕಾರ್ತಿ
2001: ಸ್ಟಾನ್ಲಿ ಕ್ಯೂಬ್ರಿಕ್, ಖ್ಯಾತ ಚಲನಚಿತ್ರ ನಿರ್ದೇಶಕ

# ಧನುರ್ಮಾಸದಲ್ಲಿ ವಿಷ್ಣುವಿನ ಆರಾಧನೆ

**- ವಿಶ್ವಾಸ್ ಡಿ. ಗೌಡ, ಸಕಲೇಶಪುರ**

ಧನುರ್ಮಾಸವೆಂದರೆ ಎಲ್ಲಾ ದೇವಾಲಯಗಳಲ್ಲೂ ಬ್ರಾಹ್ಮೀ ಮುಹೂರ್ತದಲ್ಲೇ ಪೂಜೆ ನಡೆಯುವುದು ಹಿಂದಿನಿಂದಲೂ ಪಾಲಿಸಿಕೊಂಡು ಬಂದ ಸಂಪ್ರದಾಯ.

ಹಿಂದು ಧರ್ಮದಲ್ಲಿರುವ ಪ್ರತಿ ಮಾಸಗಳು ಸಹ ಅತ್ಯಂತ ಮಹತ್ವ ಪಡೆದಿದೆ. ಆಯಾ ಮಾಸಗಳಿಗೆ ಅನುಸಾರವಾಗಿ ಆಚರಣೆ, ಸಂಪ್ರದಾಯ, ದೇವರ ಪೂಜಾ ವಿಧಾನಗಳ ಮೂಲಕ ಜೀವನವನ್ನು ಹೇಗೆ ನಡೆಸಬೇಕೆನ್ನುವುದರ ಸಾರವನ್ನು ತಿಳಿಸಿಕೊಡುತ್ತದೆ. ಮಾಸಗಳು ಬದಲಾದಂತೆ ವಾತಾವರಣವೂ ಬದಲಾಗುತ್ತದೆ. ಅದಕ್ಕೆ ಅನುಗುಣವಾಗಿ ಮನುಷ್ಯನ ದೇಹವೂ ಒಗ್ಗಿಕೊಳ್ಳಬೇಕೆನ್ನುವ ವೈಜ್ಞಾನಿಕ ಹಿನ್ನೆಲೆಯೂ ಮಾಸಗಳಲ್ಲಿ ಬರುವ ಆಚರಣೆಗಳ ಹಿಂದಿದೆ

ಸೌರ ಮಂಡಲದ ರಾಜನಾದ ಸೂರ್ಯನು ಒಂದು ರಾಶಿಯಿಂದ ಇನ್ನೊಂದು ರಾಶಿಗೆ ಸಂಚರಿಸುತ್ತಾನೆ. ಈ ಸಂಚಾರಕ್ಕೆ ತೆಗೆದುಕೊಳ್ಳುವ ಅವಧಿ ಒಂದು ತಿಂಗಳು. ಡಿ. 16ರಂದು ಸೂರ್ಯನು ಧನು ರಾಶಿಯನ್ನು ಪ್ರವೇಶಿಸಿದ್ದು ಮಕರ ರಾಶಿಯನ್ನು ಪ್ರವೇಶಿಸಲು ಒಂದು ತಿಂಗಳ ಕಾಲಾವಕಾಶ ಪಡೆಯುತ್ತಾನೆ. ಈ ಅವಧಿಯನ್ನೇ ಟಧನುರ್ಮಾಸಟ ಎಂದು ಕರೆಯುತ್ತಾರೆ.

ಈ ಮಾಸವು ಶುಭಕರವಲ್ಲವೆಂದು ಮದುವೆ, ಗೃಹ ಪ್ರವೇಶ ಮುಂತಾದ ಕಾರ್ಯಕ್ರಮಗಳನ್ನು ಮಾಡುವುದಿಲ್ಲ. ಬದಲಾಗಿ ಈ ಮಾಸ ಪೂರ್ತಿ ವಿಷ್ಣುವಿನ ಆರಾಧನೆಯಲ್ಲೇ ಕಳೆಯುತ್ತಾರೆ. ಉತ್ಥಾನ ದ್ವಾದಶಿಯಂದು ಯೋಗ ನಿದ್ರೆಯಿಂದ ಏಳುವ ಮಹಾವಿಷ್ಣುವಿಗೆ ಧನುರ್ಮಾಸವು ಅರುಣೋದಯದ ಕಾಲವೆಂದು ಹೇಳಲಾಗುತ್ತದೆ. ಹಾಗಾಗಿ ಧನುರ್ಮಾಸವು ಶ್ರೀಹರಿಯ ಪೂಜೆಗೆ ಶ್ರೇಷ್ಠವಾದ ಕಾಲವೆನಿಸಿಕೊಂಡಿದೆ. ಶೈವ ಆರಾಧಕರು ಧನುರ್ಮಾಸದಲ್ಲಿ ಶಿವನ ಆರಾಧನೆಯನ್ನೂ ಮಾಡುತ್ತಾರೆ.

## ಧನುರ್ಮಾಸದ ಮಹತ್ವ

ಬ್ರಾಹ್ಮೀ ಮುಹೂರ್ತದಲ್ಲಿ ಚುಮು ಚುಮು ಚಳಿಯಲ್ಲೇ ಎದ್ದು ಸ್ನಾನಾದಿಗಳನ್ನು ಮುಗಿಸಿ ನಕ್ಷತ್ರಗಳು ಇನ್ನೂ ಹೊಳೆಯುತ್ತಿರುವಾಗಲೇ ದೇಗುಲಗಳಲ್ಲಿ ಮುಂಜಾನೆಯ ಪೂಜೆಯು ಆರಂಭವಾಗಿ ಸೂರ್ಯೋದಯಕ್ಕಿಂತ ಮುನ್ನವೇ ಮುಕ್ತಾಯವಾಗುವ ಮಾಸವಿದು. ಇದನ್ನು ಧನು ಪೂಜೆ ಎಂದೂ ಕರೆಯುತ್ತಾರೆ. ಇದರ ಹಿಂದೆ ಕಾರಣವೂ ಇದೆ. ದೇವತೆಗಳಿಗೆ ದಕ್ಷಿಣಾಯಣವು ರಾತ್ರಿಯ ಕಾಲ, ಉತ್ತರಾಯಣವು ಹಗಲಿನ ಕಾಲ. ಆದರೆ ಈ ಧನುರ್ಮಾಸವು ರಾತ್ರಿ ಮತ್ತು ಹಗಲು ಎರಡೂ ಸೇರಿದ ಸಮಯವೆಂದೂ ಬ್ರಾಹ್ಮೀ ಮುಹೂರ್ತದಲ್ಲಿ ಎದ್ದು ಸ್ನಾನ ಮಾಡಿ ಯಾರು ಭಗವಂತನನ್ನು ಪೂಜಿಸಿ ನೈವೇದ್ಯವನ್ನು ಅರ್ಪಿಸುತ್ತಾರೋ ಅವರ ಸಕಲ ಇಷ್ಟಾರ್ಥಗಳು ನೆರವೇರುತ್ತದೆ.



ಧನುರ್ಮಾಸದಲ್ಲಿ ವಿಶೇಷವಾಗಿ ಮುಂಜಾನೆ ವಿಷ್ಣು ಸಹಸ್ರನಾಮ ಪಾರಾಯಣ, ಪುರುಷ ಸೂಕ್ತಂ, ಶ್ರೀ ವಿಷ್ಣು ಸೂಕ್ತಂ ಅಥವಾ ನಾರಾಯಣ ಉಪನಿಷತ್ತನ್ನು ಪಠಣ ಮಾಡಲಾಗುತ್ತದೆ. ಕೆಲವರು ಮಹಾವಿಷ್ಣುವಿನೊಂದಿಗೆ ಮಹಾಲಕ್ಷ್ಮೀಯನ್ನು ಪೂಜಿಸುತ್ತಾರೆ. ಹೀಗೆ ಪೂಜಿಸುವುದರಿಂದ ಸಂಪತ್ತು ಒಲಿಯುವುದೆಂದು ಹೇಳಲಾಗುತ್ತದೆ. ಹಿಂದೆ ದೇವ ರಾಜನಾದ ಇಂದ್ರನು ರಾಜ್ಯವನ್ನು ಕಳೆದುಕೊಂಡಾಗ ಶಚೀದೇವಿಯು ಹುಗ್ಗಿಯ ನೈವೇದ್ಯ ಮಾಡಿ ವಿಷ್ಣುವಿಗೆ ಸಮರ್ಪಿಸಿ, ಶ್ರೀಹರಿಯೊಂದಿಗೆ ಮಹಾಲಕ್ಷ್ಮೀಯನ್ನೂ ದ್ವಾದಶನಾಮಗಳಿಂದ ಸ್ತುತಿಸಿದಳಂತೆ, ಇದರ ಫಲವಾಗಿ ಇಂದ್ರನು ರಾಜ್ಯವನ್ನು ಮರಳಿ ಪಡೆದನು ಎನ್ನುವ ಪುರಾಣ ಕಥೆಯಿದೆ.

ಕಾತ್ಯಾಯಿನಿ ವ್ರತ: ಭಾಗವತ ಪುರಾಣದಲ್ಲಿ ಧನುರ್ಮಾಸದ ಮುಂಜಾನೆ ಮಾಡುವ ವ್ರತದ ಫಲವು ಭಕ್ತರಿಗೆ ಸರ್ವವಿಧದ ಫಲಗಳನ್ನು ನೀಡುತ್ತದೆ ಎನ್ನುವ ಉಲ್ಲೇಖವಿದೆ. ನಂದಗೋಪನ ಮಗನಾದ ಶ್ರೀ ಕೃಷ್ಣನನ್ನು ಪತಿಯಾಗಿ ವರಿಸಲು ಗೋಪಿಯರೆಲ್ಲ ಸೇರಿ ಈ ವ್ರತ ಮಾಡುತ್ತಾರೆ. ಅಂತಹ ಪರಮಾತ್ಮನನ್ನೇ ದೊರಕಿಸಿಕೊಡುವ ಪುಣ್ಯ ಮಾಸವಾದ್ದರಿಂದ ಧನು ಮಾಸದಲ್ಲಿ ಶೈವ, ವೈಷ್ಣವ, ಶಾಕ್ತರೆಲ್ಲರೂ ದೇಗುಲಗಳಲ್ಲಿ ಧನುರ್ಮಾಸದ ಆಚರಣೆಯನ್ನು ಮಾಡುತ್ತಾರೆ.

### ಧನುರ್ಮಾಸದ ಆಚರಣೆ

- ಮುಂಜಾನೆ ಬ್ರಾಹ್ಮೀ ಮುಹೂರ್ತದಲ್ಲಿ ಎದ್ದು ಸ್ನಾನಾದಿ ಕರ್ಮ ಮುಗಿಸಬೇಕು.
- ಸೂರ್ಯೋದಯಕ್ಕಿಂತ ಮೊದಲೇ ದೇವರ ಪೂಜೆ ಮುಗಿಸಬೇಕು. ಆಕಾಶದಲ್ಲಿ ನಕ್ಷತ್ರ ಕಾಣಿಸುವ ಸಮಯದಲ್ಲಿ ಮಾಡಿದ ಪೂಜೆ ಶ್ರೇಷ್ಠ, ನಂತರ ಮಧ್ಯಮ, ಸೂರ್ಯೋದಯದ ನಂತರ ಅಧಮ, ನಿಷ್ಫಲವೆಂದು ಹೇಳಲಾಗುತ್ತದೆ.
- ಪ್ರತಿನಿತ್ಯ ದೇವರಿಗೆ ನೈವೇದ್ಯವಾಗಿ ಮುದ್ಗಾನ್ನ ಅಂದರೆ ಹುಗ್ಗಿಯನ್ನು ಅರ್ಪಿಸಬೇಕು.
- ಪಾರಾಯಣವನ್ನು ನೈವೇದ್ಯ ಅರ್ಪಣೆಯ ನಂತರವೂ ಮಾಡಬಹುದು.
- ಸಂಧ್ಯಾವಂದನೆ, ನಿತ್ಯಾಹ್ನಿಕವನ್ನು ಪೂಜಾನಂತರ ಮಾಡಿದರೂ ಯಾವುದೇ ದೋಷವಿರುವುದಿಲ್ಲ.
- ಧನುರ್ಮಾಸದ ಒಂದು ದಿನ ವಿಷ್ಣುವಿಗೆ ಪೂಜೆ ಮಾಡಿದರೆ ಸಾವಿರ ವರ್ಷ ಪೂಜೆ ಮಾಡಿದ ಫಲ ದೊರೆಯುವುದು.

# ಡಾ. ತೃಪ್ತಿದಾಸ್‌ಗೆ ಅಂತಾರಾಷ್ಟ್ರೀಯ ಮಾನ್ಯತೆ

ಹಾಸನ: ಜಿಲ್ಲೆಯ ಖ್ಯಾತ ವೈದ್ಯ ಡಾ. ಹೆಚ್.ಆರ್. ದೇವದಾಸು (ಆನಂದ ದಾಸ್ ಡಯಾಗ್ನೋಸ್ಟಿಕ್ ಲ್ಯಾಬ್) ಹಾಗೂ ಡಾ. ಕೆ.ವಿ. ಸುಜಾತಾ (ದಾಸ್ ಸ್ಕ್ಯಾನಿಂಗ್ ಸೆಂಟರ್) ಅವರ ಪುತ್ರಿ ಡಾ. ತೃಪ್ತಿ ದಾಸ್ ಅವರು ಯುರೋಪಿಯನ್ ಡಿಪ್ಲೊಮಾ ಇನ್ ರೇಡಿಯಾಲಜಿ (CBS) ಪರೀಕ್ಷೆಯನ್ನು ಯಶಸ್ವಿಯಾಗಿ ಉತ್ತೀರ್ಣರಾಗುವ ಮೂಲಕ ಜಿಲ್ಲೆಯ ಮೊದಲ ಮಹಿಳಾ ವೈದ್ಯೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಡಾ. ತೃಪ್ತಿ ಅವರು ಇದೀಗ ಯುರೋಪಿಯನ್ ಬೋರ್ಡ್ ಪ್ರಮಾಣಿತ ತಜ್ಞರಾಗಿ ಗುರುತಿಸಲ್ಪಟ್ಟಿದ್ದಾರೆ. ಅವರು ಡಯಾಗ್ನೊಸ್ಟಿಕ್ ರೇಡಿಯಾಲಜಿ (CBS) ಮತ್ತು ಇಂಟರ್ವೆನ್ಶನಲ್ ರೇಡಿಯಾಲಜಿ (C@S) ಎಂಬ ಎರಡೂ ಕ್ಷೇತ್ರಗಳಲ್ಲಿ ಕೇವಲ ಒಂದು ತಿಂಗಳಲ್ಲಿ ಯುರೋಪಿಯನ್ ಮಟ್ಟದ ಎರಡು ಪ್ರಮಾಣಪತ್ರಗಳನ್ನು ಪಡೆದಿರುವುದು ವಿಶೇಷ ಸಾಧನೆಯಾಗಿದೆ.

**JB, BK, DXS, C@S, CBS** ಸೇರಿ ಅಂತಾರಾಷ್ಟ್ರೀಯ ಮಟ್ಟದ ಪ್ರತಿಷ್ಟಿತ ಪದವಿ ಗಳಿಸಿರುವ ಅವರು ಪ್ರತಿಭಾವಂತ ರೇಡಿಯಾಲಜಿಸ್ಟ್ ಆಗಿ ಗುರುತಿಸಿಕೊಂಡಿದ್ದಾರೆ. ಈ ರೀತಿ ಸಾಧನೆ ಮಾಡಿದಂತಹ ಬೆರಳೆಣಿಕೆ ಮಂದಿಯಲ್ಲಿ ಇವರು ಕೂಡ ಒಬ್ಬರು.

ಮಂಗಳೂರಿನ ಯೆನೆಪೋಯ ವೈದ್ಯಕೀಯ ಕಾಲೇಜಿನಲ್ಲಿ ಎಂಬಿಬಿಎಸ್ ಶಿಕ್ಷಣ ಪೂರ್ಣಗೊಳಿಸಿದ ಡಾ. ತೃಪ್ತಿದಾಸ್ ಅವರು ನಾಲ್ಕು ವರ್ಷಗಳಲ್ಲಿ ಡಿಸ್ಟಿಂಕ್ಷನ್ ಸಾಧಿಸುವುದರ ಜೊತೆಗೆ ವಿಶ್ವವಿದ್ಯಾಲಯ ಮಟ್ಟದಲ್ಲಿ ಅಗ್ರ ಶ್ರೇಣಿಯ ರ್‍ಯಾಂಕ್ ಪಡೆದು ಗಮನ ಸೆಳೆದಿದ್ದರು.



ನಂತರ ದಾವಣಗೆರೆಯ ಜೆಜೆಎಂ ವೈದ್ಯಕೀಯ ಕಾಲೇಜಿನಲ್ಲಿ ರೇಡಿಯಾಲಜಿಯಲ್ಲಿ ಎಂಡಿ ಪದವಿ ಪಡೆದ ಅವರು, ಕಾಲೇಜಿಗೆ ಚಿನ್ನದ ಪದಕವನ್ನು ಗಳಿಸಿದ್ದು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯಕ್ಕೆ (SEF) 4ನೇ ರ್‍ಯಾಂಕ್ ಪಡೆಯುವ ಮೂಲಕ ತಮ್ಮ ಶೈಕ್ಷಣಿಕ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದರು. ಅಲ್ಲದೆ ರೇಡಿಯಾಲಜಿಯಲ್ಲಿ ಡಿಪ್ಲೊಮೇಟ್ ಆಫ್ ನ್ಯಾಷನಲ್ ಬೋರ್ಡ್ (BK) ಪದವಿಯನ್ನೂ ಅವರು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ಹಲವು ಯುವ ವೈದ್ಯರಿಗೆ ಪ್ರೇರಣೆಯಾಗಿದ್ದಾರೆ.

ಇಂಟರ್ವೆನ್ಷನಲ್ ರೇಡಿಯಾಲಜಿ ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಹೊಂದಿರುವ ಡಾ. ತೃಪ್ತಿದಾಸ್ ಅವರು 2023 ರಿಂದ 2025ರ ವರೆಗೆ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ತರಬೇತಿ ಪೂರ್ಣಗೊಳಿಸಿದ್ದಾರೆ. ಇದೇ ವೇಳೆ ಕೇವಲ ಒಂದೇ ತಿಂಗಳ ಅವಧಿಯಲ್ಲಿ ಯುರೋಪಿನ ಎರಡು ಅತ್ಯಂತ ಪ್ರತಿಷ್ಠಿತ ಮತ್ತು ಕಠಿಣವೆಂದು ಪರಿಗಣಿಸಲ್ಪಡುವ ಪದವಿಗಳಾದ ಯುರೋಪಿಯನ್ ಡಿಪ್ಲೊಮಾ ಇನ್ ರೇಡಿಯಾಲಜಿ (CBS) ಹಾಗೂ ಯುರೋಪಿಯನ್ ಬೋರ್ಡ್ ಆಫ್ ಇಂಟರ್ವೆನ್ಷನಲ್ ರೇಡಿಯಾಲಜಿ (C@S) ಗಳಿಸುವ ಮೂಲಕ ಅಪರೂಪದ ಸಾಧನೆ ಮಾಡಿದ್ದಾರೆ. ಈ ಪ್ರಮಾಣ ಪತ್ರಗಳನ್ನು ಪಡೆದಿರುವ ಭಾರತದ ಕೆಲವೇ ಕೆಲವು ಮಹಿಳಾ ರೇಡಿಯಾಲಜಿಸ್ಟ್‌ಗಳಲ್ಲಿ ಡಾ. ತೃಪ್ತಿದಾಸ್ ಒಬ್ಬರಾಗಿದ್ದಾರೆ.

ಪ್ರಸ್ತುತ ಡಾ. ತೃಪ್ತಿದಾಸ್ ಅವರು ಬೆಂಗಳೂರಿನ ಪೀಪಲ್ ಟ್ರೀ ಆಸ್ಪತ್ರೆಯಲ್ಲಿ ಪೂರ್ಣಕಾಲಿಕ ಕನ್ಸಲ್ಟೆಂಟ್ ಆಗಿ ಸೇವೆ ಸಲ್ಲಿಸುತ್ತಿದ್ದು, ಅಲ್ಲಿನ ಇಂಟರ್ವೆನ್ಷನಲ್ ರೇಡಿಯಾಲಜಿ ವಿಭಾಗದ ಮುಖ್ಯಸ್ಥರಾಗಿದ್ದಾರೆ. ಜೊತೆಗೆ ಎಂ.ಎಸ್. ರಾಮಯ್ಯ ವೈದ್ಯಕೀಯ ಕಾಲೇಜು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಸಂದರ್ಶಕ ಕನ್ಸಲ್ಟೆಂಟ್ ಆಗಿಯೂ ಕಾರ್ಯ ನಿರ್ವಹಿಸುತ್ತಿದ್ದಾರೆ.

ರೇಡಿಯಾಲಜಿಯಲ್ಲಿ ಕೃತಕ ಬುದ್ಧಿಮತ್ತೆ ಬಳಕೆ, ಶೈಕ್ಷಣಿಕ ಸಂಶೋಧನೆ ಹಾಗೂ ರೋಗಿಗಳಿಗೆ ಸುಧಾರಿತ ಮತ್ತು ಕಡಿಮೆ ಅಪಾಯದ ಚಿಕಿತ್ಸೆ ನೀಡುವಲ್ಲಿ ಅವರು ವಿಶೇಷ ಆಸಕ್ತಿ ಹೊಂದಿದ್ದಾರೆ. ಇಮೇಜ್ ಗೈಡೆಡ್ ಇಂಟರ್ವೆನ್ಷನ್ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನ ಮತ್ತು ಆವಿಷ್ಕಾರಗಳನ್ನು ಅಳವಡಿಸುವ ನಿಟ್ಟಿನಲ್ಲಿ ಅವರು ನಿರಂತರವಾಗಿ ಶ್ರಮಿಸುತ್ತಿದ್ದಾರೆ.

ಜಿಲ್ಲೆಯ ಹೆಮ್ಮೆಯ ಪುತ್ರಿಯಾಗಿರುವ ಡಾ. ತೃಪ್ತಿದಾಸ್ ಅವರ ಈ ಸಾಧನೆಗಳು ಯುವ ವೈದ್ಯರು ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದಾರೆ. ಅವರ ಈ ಸಾಧನೆಗೆ ಪೋಷಕರು ಸಂಬಂಧಿಕರು ಸ್ನೇಹಿತರು ಸೇರಿ ಜಿಲ್ಲೆಯ ಹಲವು ವೈದ್ಯರು ಕೂಡ ಅಭಿನಂದಿಸಿ ಶುಭ ಹಾರೈಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248